**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/75/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು.ದಿನಾಂಕ:10.02.2023.

**ಸುತ್ತೋಲೆ**

ವಿಷಯ:2022-23ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ವಿವಿಧ ವಿದ್ಯಾರ್ಥಿ ವೇತನ/ಶುಲ್ಕ ಮರುಪಾವತಿಗಾಗಿ ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಇಡಿ/237/ಹೆಚ್‌ಪಿಸಿ/2022, ಬೆಂಗಳೂರು, ದಿನಾಂಕ:11.01.2023.

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2022-23ನೇ ಸಾಲಿನಿಂದ ಸಂಚಿಹೊನ್ನಮ್ಮ ಮತ್ತು ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನ,ಆದಾಯ ಮಿತಿ ರೂ.2.50 ಲಕ್ಷಕ್ಕಿತ ಹೆಚ್ಚು ಇರುವ ಎಸ್.ಸಿ ಎಸ್.ಟಿ ವಿದ್ಯಾರ್ಥಿಗಳು ಮತ್ತು ಸೈನಿಕ ಸಿಬ್ಬಂದಿ ಮಕ್ಕಳ ಶುಲ್ಕ ಮರುಪಾವತಿ ಯೋಜನೆಯನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗಿದ್ದು, ಪ್ರಸ್ತುತ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ನೂತನ/ನವೀಕರಣದ ಮಂಜೂರಾತಿಗಾಗಿ ಎಸ್.ಎಸ್.ಪಿ. ಪೋರ್ಟಲ್‌ನ **(SSP Portal)** ಈ ಮುಂದಿನ ಲಿಂಕ್ **:https://ssp.postmatric.karnataka.gov.in/2223processing/loginPage.aspx** ಮೂಲಕ **ದಿ:20.02.2023 ರೊಳಗೆ** ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

| ಕ್ರಮ ಸಂಖ್ಯೆ | ವಿದ್ಯಾರ್ಥಿವೇತನ ಯೋಜನೆಯ ಹೆಸರು | ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆ | ಅರ್ಜಿ ಸಲ್ಲಿಸುವ ಬಗ್ಗೆ |
|---|---|---|---|
| 1 | ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ | ವಿಜ್ಞಾನ ಪದವಿ ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯರು | ವಿದ್ಯಾರ್ಥಿಗಳು ಈ ಎಲ್ಲಾ ವಿದ್ಯಾರ್ಥಿವೇತನಕ್ಕೆ ಒಂದೇ ಅರ್ಜಿಯನ್ನು ಪೋರ್ಟಲ್ ನಲ್ಲಿ ಸಲ್ಲಿಸಬೇಕು |
| 2 | ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ | ಕಲಾ ಮತ್ತು ವಾಣಿಜ್ಯ ಪದವಿ ತರಗತಿಯ ವಿದ್ಯಾರ್ಥಿನಿಯರು | |
| 3 | ಸೈನಿಕ ಸಿಬ್ಬಂದಿ ಮಕ್ಕಳ ಶುಲ್ಕ ಮರುಪಾವತಿ | ವಿವಿಧ ಪದವಿ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳು | |
| 4 | ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ | ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿನಿಯರು | |

## ಷರತ್ತುಗಳು ಮತ್ತು ನಿಬಂಧನೆಗಳು

1.ಸರ್.ಸಿ.ವಿರಾಮನ್ ವಿದ್ಯಾರ್ಥಿವೇತನ:-

- ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸುಗಳನ್ನು ಹೊರತುಪಡಿಸಿ) ವಿಜ್ಞಾನದ ಕೋರ್ಸುಗಳಿಗೆ ಪ್ರವೇಶ ಪಡೆದು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಭೂಗರ್ಭಶಾಸ್ತ್ರ, ಸಸ್ಯಶಾಸ್ತ್ರ, ಮತ್ತು ಪ್ರಾಣಿಶಾಸ್ತ್ರ, ವಿಷಯಗಳಲ್ಲಿ ಕನಿಷ್ಠ 2 ವಿಷಯಗಳನ್ನಾದರೂ ತೆಗೆದುಕೊಂಡು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ.

- ಪ್ರಥಮ ವರ್ಷದ ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿ ಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ.65 ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೇ.60 ರಷ್ಟು ಅಂಕಗಳನ್ನು ಪಡೆದಿರಬೇಕು.

- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮಾತ್ರ ಪ್ರಥಮ ವರ್ಷದ ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.

- ನವೀಕರಣ ವಿದ್ಯಾರ್ಥಿ ವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಸೆಮಿಸ್ಟರ್/ತರಗತಿಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.

- 2022-23ನೇ ಸಾಲಿನಿಂದ ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನ ಯೋಜನೆಯನ್ನು **SSP Portal** ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ಅಗತ್ಯ ದಾಖಲೆಗಳನ್ನು SSP Portal ನಲ್ಲಿ UP Load ಮಾಡುವುದು.

2 ಸಂಚಿ ಹೊನ್ನಮ್ಮ ವಿದ್ಯಾರ್ಥಿ ವೇತನ:-

- ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸುಗಳನ್ನು ಹೊರತುಪಡಿಸಿ) ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಸಂಚಿಹೊನ್ನಮ್ಮ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುತ್ತಾರೆ.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿನಿಯರು ಮಾತ್ರ ಪ್ರಥಮ ವರ್ಷದ ಸಂಚಿ ಹೊನ್ನಮ್ಮ ವಿದ್ಯಾರ್ಥಿ ವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.

- ಪ್ರಥಮ ವರ್ಷದ ಸಂಚಿಹೊನ್ನಮ್ಮ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿ ಯಲ್ಲಿ ಸಾಮಾನ್ಯ ವಿದ್ಯಾರ್ಥಿನಿಯರು ಶೇ.75 ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಗೂ ಪ್ರವರ್ಗ-1 ವಿದ್ಯಾರ್ಥಿನಿಯರು ಶೇ.60 ರಷ್ಟು ಅಂಕಗಳನ್ನು ಪಡೆದಿರಬೇಕು.

- ನವೀಕರಣ ವಿದ್ಯಾರ್ಥಿ ವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿನಿಯರು ಹಿಂದಿನ ವರ್ಷದ ಸೆಮಿಸ್ಟರ್/ತರಗತಿಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು

- 2022-23ನೇ ಸಾಲಿನಿಂದ ಸಂಚಿಹೊನ್ನಮ್ಮ ವಿದ್ಯಾರ್ಥಿ ವೇತನ ಯೋಜನೆಯನ್ನು **SSP Portal** ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ಅಗತ್ಯ ದಾಖಲೆಗಳನ್ನು SSP Portal ನಲ್ಲಿ UP Load ಮಾಡುವುದು.

**3.** ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ:-

- ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ವಿವಿಧ ಪದವಿ ತರಗತಿಗೆ ಪ್ರವೇಶ ಪಡೆದು ಅನುದಾನರಹಿತ ಕೋರ್ಸ್‌ಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ, ಸೈನಿಕ ಸಿಬ್ಬಂದಿ ಮಕ್ಕಳು ಶುಲ್ಕ ಮರುಪಾವತಿಗೆ ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು.

- ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಇತರೆ ಇಲಾಖೆಗಳು ನೀಡುವ ವಿದ್ಯಾರ್ಥಿವೇತನ /ಶುಲ್ಕ ಮರುಪಾವತಿ ಮಂಜೂರಾತಿಗೆ ಅರ್ಹರಿರುವುದಿಲ್ಲ.

- ನವೀಕರಣದ ಶುಲ್ಕ ಮರುಪಾವತಿ ಮಂಜೂರಾತಿ ಪಡೆಯಲು ಸೈನಿಕ ಸಿಬ್ಬಂದಿ ಮಕ್ಕಳು ಹಿಂದಿನ ವರ್ಷದ ಸೆಮಿಸ್ಟರ್/ತರಗತಿಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು

- ದೇಶದ ರಕ್ಷಣಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ/ ನಿರ್ವಹಿಸಿದ ಸೈನಿಕ ಸಿಬ್ಬಂದಿ ಮಕ್ಕಳು/ ದತ್ತು ಮಕ್ಕಳು ಶುಲ್ಕ ಮರುಪಾವತಿಗೆ ಅರ್ಹರಿರುತ್ತಾರೆ.

- 2022-23ನೇ ಸಾಲಿನಿಂದ ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ ಯೋಜನೆಯನ್ನು **SSP Portal** ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ಅಗತ್ಯ ದಾಖಲೆಗಳನ್ನು SSP Portal ನಲ್ಲಿ UP Load ಮಾಡುವುದು

**4.** ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ:-

- 2022-23 ನೇ ಸಾಲಿಗೆ ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆದು ವಿವಿಧ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿನಿಯರು ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಬಹುದು

- ವಿದ್ಯಾರ್ಥಿನಿಯರು ಇಲಾಖೆಯ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಬೇಕಾದಲ್ಲಿ ಬೇರೆ ಬೇರೆ ಇಲಾಖೆಗಳು ನೀಡುವ ಯಾವುದೇ ವಿದ್ಯಾರ್ಥಿವೇತನವನ್ನು ಅಥವಾ ಶುಲ್ಕ ಮರುಪಾವತಿ ಪಡೆದಿರಬಾರದು .

- ಸಂಚಿ ಹೊನ್ನಮ್ಮ ಅಥವಾ ಸರ್.ಸಿ.ವಿ ರಾಮನ್ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿನಿಯರು ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ ಪ್ರಯೋಜನ ಪಡೆಯಲು ಅರ್ಹರಿರುತ್ತಾರೆ.

- 2022-23ನೇ ಸಾಲಿನಿಂದ ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ ಯೋಜನೆಯನ್ನು **SSP Portal** ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿನಿಯರು ಎಸ್.ಎಸ್.ಪಿ. ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ಅಗತ್ಯ ದಾಖಲೆಗಳನ್ನು SSP Portal ನಲ್ಲಿ UP Load ಮಾಡುವುದು.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ – ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ
2) ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಚನಾ ಫಲಕದಲ್ಲಿ ಸುತ್ತೋಲೆಯಲ್ಲಿರುವ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು
3) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ
4) ಕಛೇರಿ ಪ್ರತಿ.